ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೩೦**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**
**(ಮುಂದುವರೆದ ಉಪವೇಶನಗಳು)**
**ಮಂಗಳವಾರ, ದಿನಾಂಕ: ೨೧ನೇ ನವೆಂಬರ್, ೨೦೧೭**

---

**ಸಮೂಹ – II**

೧. ಇಂಧನ ಸಚಿವರು.
೨. ಕೃಷಿ ಸಚಿವರು.
೩. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.
೪. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.
೫. ಸಹಕಾರ ಸಚಿವರು.
೬. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.
೭. ಜವಳಿ ಹಾಗೂ ಮುಜರಾಯಿ ಸಚಿವರು.

---

## ಸಿ.ಆರ್.ಎಫ್. ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೩೬ (೪೨೫೯) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ೨೦೦೪ ರಿಂದ ೨೦೧೭ರವರೆಗೆ ಕೇಂದ್ರ ಸರಕಾರ ರಾಜ್ಯ ಸರಕಾರಕ್ಕೆ ಸಿ.ಆರ್.ಎಫ್. ನಿಧಿಯಲ್ಲಿ ನೀಡಿರುವ ಅನುದಾನ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ೨೦೦೪ ರಿಂದ ೨೦೧೭ರವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ? (ವರ್ಷಾವಾರು, ಜಿಲ್ಲಾವಾರು ವಿವರ ನೀಡುವುದು)

## ರಾಜ್ಯ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) –**

೪೩೭ (೪೫೨೮) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟು ಕಿ.ಮೀ. ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಮೇಲ್ದರ್ಜೆಗೇರಿಸಲಾಗಿದೆ ; ಅವುಗಳು ಯಾವುವು ; (ವಿವರ ನೀಡುವುದು)

(ಆ) ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟು ಕಿ.ಮೀ. ರಾಜ್ಯ ಹೆದ್ದಾರಿಗಳೆಂದು ಘೋಷಿಸಲಾಗಿದೆ ; ಅದರಲ್ಲಿ ಯಾವ ಯಾವ ಯೋಜನೆಗಳಡಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ ; ಪ್ರಗತಿಯಲ್ಲಿರುವ ಕಾಮಗಾರಿಗಳಾವುವು ; ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಇ) ಈ ಸಾಲಿನಲ್ಲಿ ಎಷ್ಟು ಕಿ.ಮೀ. ಮುಖ್ಯ ಜಿಲ್ಲಾ ರಸ್ತೆಗಳನ್ನು ರಾಜ್ಯ ಹೆದ್ದಾರಿಗಳನ್ನಾಗಿ ಪರಿವರ್ತಿಸಿ ಕೈಗೆತ್ತಿಕೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಬೆಂಗಳೂರು–ಮೈಸೂರು ರಾಜ್ಯ ಹೆದ್ದಾರಿಯನ್ನು ೬ ಪಥದ ರಸ್ತೆಯನ್ನಾಗಿ (6 Lane) ಮಾಡಲು ಉದ್ದೇಶಿಸಿದ್ದು, ಈವರೆಗೆ ಆದಂತಹ ಪ್ರಗತಿಯ ವಿವರವನ್ನು ನೀಡುವುದು ?

## ಸಂಚಾರಿ ಪಶು ಚಿಕಿತ್ಸಾಲಯಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೩೮ (೪೩೯೯) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪಶುಸಂಗೋಪನಾ ಇಲಾಖೆಯಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಸಂಚಾರಿ ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿದೆಯೇ ; ಈ ಸೌಲಭ್ಯ ಪ್ರಾರಂಭವಾಗಿ ಎಷ್ಟು ವರ್ಷಗಳಾಯಿತು ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಸಂಚಾರಿ ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಸಂಚಾರಿ ಪಶು ಚಿಕಿತ್ಸಾಲಯದಲ್ಲಿ ಎಲ್ಲಾ ರೀತಿಯ ಜಾನುವಾರುಗಳಿಗೆ ಎಲ್ಲಾ ರೀತಿ ಚಿಕಿತ್ಸೆ ನೀಡುವ ಸೌಲಭ್ಯಗಳಿದೆಯೇ ; ಇಲ್ಲದಿದ್ದರೆ, ಅಂಥ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದೇ ?

## ರಾಜ್ಯದಲ್ಲಿ ಟೋಲ್‌ಗೇಟ್‌ಗಳು ಹಾಗೂ ಅವುಗಳ ನಿರ್ವಹಣೆ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೩೯ (೪೨೬೭) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಕಡೆ ಟೋಲ್ ಸಂಗ್ರಹದ ಗೇಟ್ ನಿರ್ಮಿಸಲಾಗಿದೆ; (ಪ್ರತಿಯೊಂದರ ವಿವರ ನೀಡುವುದು) ಯಾವ ಯಾವ ಕಂಪನಿಗಳಿಗೆ ಟೋಲ್ ಸಂಗ್ರಹದ ಅಧಿಕಾರ ವಹಿಸಲಾಗಿದೆ ; ಟೋಲ್ ಸಂಗ್ರಹಿಸಲು ವಿಧಿಸಲಾಗಿರುವ ಷರತ್ತುಗಳು ಏನು ; (ವಿವರ ನೀಡುವುದು)

(ಆ) ಟೋಲ್ ಸಂಗ್ರಹಿಸುವವರೊಂದಿಗೆ ಆದ ಒಡಂಬಡಿಕೆಯ ಪತ್ರದ ಪ್ರತಿ ನೀಡುವುದು ; (ಪ್ರತಿಯೊಂದು ಟೋಲ್‌ವಾರು ವಿವರ ನೀಡುವುದು)

(ಇ) ಪ್ರತಿ ಟೋಲ್ ಕೇಂದ್ರವಾರು ಟೋಲ್ ಸಂಗ್ರಹಿಸುವ ಕಂಪನಿ, ಅವರ ವ್ಯಾಪ್ತಿಯಲ್ಲಿ ಒದಗಿಸಬೇಕಾದ ಸೌಲಭ್ಯಗಳು, ಇವುಗಳನ್ನು ಗಮನಿಸಬೇಕಾದ ಇಲಾಖೆ ಅಧಿಕಾರಿಗಳ ಹೆಸರು, ಹುದ್ದೆ ಹಾಗೂ ಅವರನ್ನು ಸಂಪರ್ಕಿಸಬಹುದಾದ ವಿಳಾಸ ಹಾಗೂ ದೂರವಾಣಿ ಸಂಖ್ಯೆ, ಮೊಬೈಲ್ ಸಂಖ್ಯೆಗಳ ವಿವರ ನೀಡುವುದು ;

(ಈ) ಟೋಲ್ ಸಂಗ್ರಹಿಸುವವರು ಒದಗಿಸಬೇಕಾದ ಸೌಲಭ್ಯಗಳು/ಒಡಂಬಡಿಕೆ ಉಲ್ಲಂಘನೆ ಕುರಿತು ಬಂದಿರುವ ದೂರುಗಳು/ಉಲ್ಲಂಘನೆ ಪ್ರಕರಣಗಳು, ತೆಗೆದುಕೊಂಡ ಕ್ರಮಗಳು ಈ ಟೋಲ್‌ಗಳಲ್ಲಿ ನಡೆದಿರುವ ಘಟನೆಗಳ ಕುರಿತು ದಾಖಲಾಗಿರುವ ಪೊಲೀಸ್ ಕೇಸ್‌ಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಪ್ರತಿಯೊಂದು ಟೋಲ್‌ಗೇಟ್‌ಗಳಲ್ಲಿ ಕಳೆದ ೦೧ ವರ್ಷದಿಂದ ಸಂಗ್ರಹಿಸಿರುವ ಟೋಲ್ ಹಣದ ಮೊತ್ತ ಎಷ್ಟು ? (ಟೋಲ್‌ಗೇಟ್‌ವಾರು ಸಂಪೂರ್ಣ ಮಾಹಿತಿ ನೀಡುವುದು)

## ತೆಂಗಿನ ನುಸಿಪೀಡೆ ರೋಗದಿಂದ ರೈತರಿಗೆ ಆಗಿರುವ ನಷ್ಟದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೪೦ (೪೭೪೧) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾಸನ ಜಿಲ್ಲೆಯ ಕೆಲವು ತಾಲ್ಲೂಕುಗಳಲ್ಲಿ ತೆಂಗಿನ ನುಸಿಪೀಡೆ ರೋಗವು ಉಲ್ಬಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಹಾಸನ ಜಿಲ್ಲೆಯ ರೈತರು ತೆಂಗಿನ ನುಸಿಪೀಡೆ ರೋಗದಿಂದ ಎಷ್ಟು ನಷ್ಟ ಹೊಂದಿರುತ್ತಾರೆ ; ರೈತರಿಗೆ ಆಗಿರುವ ನಷ್ಟಕ್ಕೆ ಸರ್ಕಾರದಿಂದ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ತೆಂಗಿನ ನುಸಿಪೀಡೆ ರೋಗವನ್ನು ನಿವಾರಣೆ ಮಾಡಲು ತೋಟಗಾರಿಕೆ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಬೀದರ್ ಪಶು ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಸಿಬ್ಬಂದಿಗಳ ಕೊರತೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೪೪೧ (೪೨೭೩) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಇಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಸಂಶೋಧನಾ ಕಾರ್ಯಕ್ಕೆ ಹಿನ್ನಡೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೪ ವರ್ಷಗಳಲ್ಲಿ ಎಷ್ಟು ಸಿಬ್ಬಂದಿಗಳನ್ನು ಹುದ್ದೆವಾರು ನೇಮಕಾತಿ ಮಾಡಿಕೊಳ್ಳಲಾಗಿದೆ ; ಎಷ್ಟು ಸಿಬ್ಬಂದಿಗಳಿಗೆ ಬಡ್ತಿ ನೀಡಲಾಗಿದೆ ; (ಹುದ್ದೆವಾರು ವಿವರ ನೀಡುವುದು)

(ಇ) ಈ ವಿಶ್ವವಿದ್ಯಾಲಯಗಳಲ್ಲಿ ಎಷ್ಟು ವಿಭಾಗಗಳಿವೆ ; ಇವುಗಳಲ್ಲಿ ಎಷ್ಟಕ್ಕೆ ಖಾಯಂ ಮುಖ್ಯಸ್ಥರು ಇದ್ದಾರೆ ; (ವಿಭಾಗವಾರು ಮುಖ್ಯಸ್ಥರ ಸಂಪೂರ್ಣ ವಿವರ ನೀಡುವುದು)

(ಈ) ಈ ವಿಶ್ವವಿದ್ಯಾಲಯಗಳಲ್ಲಿ ಹಾಲಿ ಎಷ್ಟು ಹುದ್ದೆಗಳು ಖಾಲಿ ಇವೆ ; (ಹುದ್ದೆವಾರು ವಿವರ ನೀಡುವುದು) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಭೈರಪುರ–ಶಿಶಿಲ ರಸ್ತೆಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೪೨ (೪೫೧೭) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆ–ದಕ್ಷಿಣ ಕನ್ನಡ ಜಿಲ್ಲೆಗೆ ಹಾದು ಹೋಗುವ ಚಾರ್ಮಾಡಿ ಘಾಟ್ ರಸ್ತೆಯ ಪರ್ಯಾಯ ರಸ್ತೆ ''ಭೈರಪುರ–ಶಿಶಿಲ ರಸ್ತೆ''ಯ ಸರ್ವೇ ಕಾರ್ಯ ಪ್ರಾರಂಭವಾಗಿದೆಯೇ ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು, ಪ್ರಾರಂಭಗೊಂಡಿದ್ದಲ್ಲಿ, ಕಾಮಗಾರಿಯು ಈಗ ಯಾವ ಹಂತದಲ್ಲಿದೆ ;

(ಆ) ಈ ರಸ್ತೆಯ ವಿಳಂಬ ನೀತಿಗೆ ಕಾರಣವೇನು ; ಇದನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಕೊಡಗು ಜಿಲ್ಲೆಯ ಭಗಂಡೇಶ್ವರ ಹಾಗೂ ತಲಕಾವೇರಿ ದೇವಸ್ಥಾನಗಳನ್ನು ಪ್ರವಾಸೋದ್ಯಮ ಇಲಾಖೆಗೆ ವಹಿಸಿಕೊಡದಿರುವ ಕುರಿತು

**ಶ್ರೀಮತಿ ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೪೩ (೪೩೮೫) ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯ ಭಗಂಡೇಶ್ವರ ಹಾಗೂ ತಲಕಾವೇರಿ ದೇವಸ್ಥಾನಗಳನ್ನು ಪ್ರವಾಸೋದ್ಯಮ ಇಲಾಖೆಗೆ ವಹಿಸಿಕೊಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ಈ ರೀತಿ ಪ್ರವಾಸೋದ್ಯಮ ಇಲಾಖೆಗೆ ವಹಿಸಿಕೊಡುವುದರಿಂದ ಸದರಿ ದೇವಸ್ಥಾನಗಳ ಧಾರ್ಮಿಕ ಆಚರಣೆಗಳಿಗೆ ಧಕ್ಕೆ ಉಂಟಾಗುವುದಿಲ್ಲವೇ;

(ಇ) ಸದರಿ ದೇವಸ್ಥಾನಗಳನ್ನು ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲೇ ಉಳಿಸಿಕೊಂಡು ಧಾರ್ಮಿಕ ಆಚರಣೆಗಳಿಗೆ ಅಡ್ಡಿ ಬರದಂತೆ ಸದರಿ ದೇವಾಲಯಗಳನ್ನು ಮತ್ತಷ್ಟು ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ವಿದ್ಯುತ್ ಪರಿವರ್ತಕಗಳ ವಿತರಣೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

ಳಳಳ (ಳ೨೮೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಮಕೂರು ಜಿಲ್ಲೆಯಲ್ಲಿ ವಿದ್ಯುತ್ ಪರಿವರ್ತಕಗಳನ್ನು (ಟ್ರಾನ್ಸ್‌ಫಾರ್ಮರ್) ಪ್ರತ್ಯೇಕವಾಗಿ ಅಳವಡಿಸಿಕೊಳ್ಳಲು ರೈತರಿಂದ ಕಳೆದ ೨ ವರ್ಷಗಳಿಂದ ಇಲ್ಲಿಯ ತನಕ ಎಷ್ಟು ಅರ್ಜಿಗಳು ಬಂದಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬಂದಿರುವ ಅರ್ಜಿಗಳಲ್ಲಿ ಇಲ್ಲಿಯ ತನಕ ಎಷ್ಟು ಪರಿವರ್ತಕಗಳನ್ನು ರೈತರ ಪಂಪ್‌ಸೆಟ್‌ಗಳಿಗೆ ಪ್ರತ್ಯೇಕವಾಗಿ ಅಳವಡಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪ್ರತ್ಯೇಕವಾಗಿ ಪರಿವರ್ತಕಗಳನ್ನು ಅಳವಡಿಸಲು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಪರಿವರ್ತಕಗಳನ್ನು ಎಷ್ಟು ದಿವಸದೊಳಗಾಗಿ ರೈತರ ಪಂಪ್‌ಸೆಟ್‌ಗಳಿಗೆ ಅಳವಡಿಸಿಕೊಡಲಾಗುವುದು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ರಾಜ್ಯದ ತಾಲ್ಲೂಕು ಕೇಂದ್ರಗಳಲ್ಲಿ ಟ್ರಾನ್ಸ್‌ಫಾರ್ಮರ್ ಬ್ಯಾಂಕುಗಳನ್ನು ಮತ್ತು ದುರಸ್ಥಿ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗುವುದೆಂದು ಸರ್ಕಾರ ಘೋಷಣೆ ಮಾಡಲಾಗಿತ್ತೆ ;

(ಉ) ಹಾಗಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ತಾಲ್ಲೂಕು ಕೇಂದ್ರಗಳಲ್ಲಿ ಟ್ರಾನ್ಸ್‌ಫಾರ್ಮರ್ ಬ್ಯಾಂಕುಗಳು ಮತ್ತು ದುರಸ್ಥಿ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದೆ ; ಅಲ್ಲಿ ಇಟ್ಟಿರುವ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

## ಲೋಕೋಪಯೋಗಿ ಇಲಾಖಾ ರಸ್ತೆಯ ಗಡಿ ಅಂಚಿನಲ್ಲಿ ಕಟ್ಟಡ ನಿರ್ಮಾಣ ನಿಯಂತ್ರಣ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೪೫ (೪೫೪೦) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗ್ರಾಮ ಪಂಚಾಯತಿಗಳು ಕಟ್ಟಡ ಪರವಾನಗೆ ನೀಡುವಾಗ ರಸ್ತೆ ಅಂಚಿನಲ್ಲಿ ಕಟ್ಟಬಾರದೆನ್ನುವ ಷರತ್ತು ವಿಧಿಸಿದರೂ ರಸ್ತೆಯ ಮಾರ್ಜಿನಿನಲ್ಲಿ ಕಟ್ಟಡವನ್ನು ಕಟ್ಟುತ್ತಿರುವಾಗ ರಸ್ತೆಯ ರಕ್ಷಣೆ ಮತ್ತು ನಿರ್ವಹಣೆಯ ಜವಾಬ್ದಾರಿಯಿರುವ ಇಲಾಖೆಯ ಇಂಜಿನಿಯರ್‌ಗಳು ನಿರ್ಲಿಪ್ತರಾಗಿರುವುದರಿಂದ ರಸ್ತೆಯ ಅಂಚಿನಲ್ಲಿ ಕಟ್ಟಡಗಳು ನಿರ್ಮಾಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪರವಾನೆಗೆಯ ಷರತ್ತನ್ನು ಮೀರಿ ರಸ್ತೆಯ ಗಡಿ ಅಂಚಿನಲ್ಲಿ ಕಟ್ಟಡವನ್ನು ಕಟ್ಟುವಾಗ ರಸ್ತೆಯ ನಿರ್ವಹಣೆಯ ಜವಾಬ್ದಾರಿಯನ್ನು ಹೊಂದಿದ ಇಂಜಿನಿಯರವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದೇ ; ಅಂತಹ ಇಂಜಿನಿಯರ್ ಮತ್ತು ಕಟ್ಟಡ ಮಾಲೀಕರ ಮೇಲೆ ಕ್ರಿಮಿನಲ್ ದಾವೆಯನ್ನು ದಾಖಲಿಸಲಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ;

(ಇ) ರಸ್ತೆಯ ಅಂಚಿನಲ್ಲಿ ಕಟ್ಟಡ ನಿರ್ಮಿಸುವುದನ್ನು ನಿಯಂತ್ರಿಸದ ಇಂಜಿನಿಯರ್‌ರವರ ಕ್ರಮವನ್ನು ಕರ್ತವ್ಯ ಚ್ಯುತಿ ಎಂದು ಪರಿಗಣಿಸಲಾಗುವುದೇ ; ಈ ಬಗ್ಗೆ ಇಲಾಖೆಯು ಕೈಗೊಂಡ ಕ್ರಮವೇನು ; ಕಳೆದ ಮೂರು ವರ್ಷದಲ್ಲಿ ದಾಖಲಾದ ಪ್ರಕರಣಗಳೆಷ್ಟು ? (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

## ರೈತರ ಅನುಕೂಲಕ್ಕೆ ಶೈತ್ಯಾಗಾರ (Cold Storage) ನಿರ್ಮಿಸುವ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೪೪೬ (೪೫೧೨) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಗೋದಾಮುಗಳ ಒಟ್ಟು ಸಂಖ್ಯೆ ಎಷ್ಟು ; ದವಸ ಧಾನ್ಯಗಳ ಉತ್ಪಾದನೆಯ ಸಾಮರ್ಥ್ಯಕ್ಕೆ ಅನುಗುಣವಾಗಿ ರಾಜ್ಯಕ್ಕೆ ಇನ್ನು ಎಷ್ಟು ಗೋದಾಮುಗಳ ಅಗತ್ಯವಿರುವುದೆಂದು ಸರ್ಕಾರದ ಗಮನಕ್ಕೆ ಬಂದಿದೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಶೈತ್ಯಾಗಾರಗಳ (Cold Storage) ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಅಗತ್ಯ ಕೇಂದ್ರಗಳಲ್ಲಿ ವೈಜ್ಞಾನಿಕವಾಗಿ ಬೆಳೆಗಳನ್ನು ದಾಸ್ತಾನು ಮಾಡಲು ಗೋದಾಮು ಅಥವಾ ಶೈತ್ಯಾಗಾರ ವ್ಯವಸ್ಥೆಗಳನ್ನು ಕಲ್ಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಈ) ರೈತರು ತನ್ನ ಹೊಲದಿಂದ ಬೆಳೆದ ಬೆಳೆಗಳನ್ನು ಗ್ರಾಹಕರಿಗೆ ತಲುಪಿಸುವಾಗ ಶೇ. ೪೦% ರಷ್ಟು ಬೆಳೆಗಳು ನಷ್ಟವಾಗುತ್ತದೆ ; ಈ ನಷ್ಟವನ್ನು ಕಡಿಮೆಗೊಳಿಸುವ ಚಿಂತನೆ ಸರ್ಕಾರದ ಮುಂದಿದೆಯೇ ;

(ಉ) ಈ ದಿಸೆಯಲ್ಲಿ ರೈತರು ಬೆಳೆದ ಬೆಳೆಗಳನ್ನು ಮಾರುಕಟ್ಟೆಗೆ ರಿಯಾಯಿತಿ ದರದಲ್ಲಿ ಸಾಗಾಟ ಮಾಡಲು ಸಾರಿಗೆ ವ್ಯವಸ್ಥೆ ಮತ್ತು ವಿಶೇಷವಾಗಿ ಸೊಪ್ಪಿನ ವಾಹನಗಳನ್ನು ಸಂಚಾರಿ ಪೊಲೀಸ್‌ರವರು ತಡೆಹಿಡಿಯದಂತೆ ಕ್ರಮ ಕೈಗೊಳ್ಳುವುದೇ ;

(ಊ) ಯಶವಂತಪುರ ಆರ್.ಎಂ.ಸಿ. ಯಾರ್ಡ್‌ನ್ನು ಸಂಪೂರ್ಣವಾಗಿ ಮಾಕಳಿಗೆ ಸ್ಥಳಾಂತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಶವಂತಪುರ ಆರ್.ಎಂ.ಸಿ. ಯಾರ್ಡ್‌ನ್ನು ಯಾವ ಉದ್ದೇಶಕ್ಕೆ ಬಳಸಿಕೊಳ್ಳಲಾಗುವುದು ;

(ಋ) ಮಾಕಳಿಯಲ್ಲಿರುವ ಆರ್.ಎಂ.ಸಿ. ಯಾರ್ಡ್‌ಗೆ ಬಸ್, ರೈಲ್ವೆ, ಮೆಟ್ರೋ ಸಾರಿಗೆ ವ್ಯವಸ್ಥೆ ಕಲ್ಪಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನಲ್ಲಿ ನಡೆದಿರುವ ಅವ್ಯವಹಾರ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೪೭ (೪೩೯) ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮದ್ದೂರು ತಾಲ್ಲೂಕು, ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿರುವ ಸದಸ್ಯರ ಸಂಖ್ಯೆ ಎಷ್ಟು ; (ಸದಸ್ಯರ ಹೆಸರು, ಸದಸ್ಯತ್ವ ಸಂಖ್ಯೆ, ಅವರ ಖಾತೆಯಲ್ಲಿರುವ ಷೇರು ಮೊತ್ತದ ವಿವರವನ್ನು ಒದಗಿಸುವುದು)

(ಆ) ಸದಸ್ಯರ ಷೇರು ಮೊತ್ತವನ್ನು ಅವರ ಖಾತೆಗಳಿಗೆ ಜಮಾ ಮಾಡುವಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಸಂಘದಲ್ಲಿ ಒಬ್ಬ ಸದಸ್ಯನಿಗೆ ಒಂದು ಅವಧಿಗೆ ಎಷ್ಟು ಬಾರಿ ಸಾಲ ನೀಡಬಹುದು; ಒಂದೇ ಅವಧಿಯಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ಸಾಲ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸದಸ್ಯರ ಷೇರು ಮೊತ್ತ ಮತ್ತು ಸಾಲ ನೀಡುವಲ್ಲಿ ಆಗಿರುವ ಅವ್ಯವಹಾರಗಳ ಕುರಿತು ಕೈಗೊಂಡಿರುವ ಕ್ರಮಗಳೇನು ; ಯಾರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ;

(ಉ) ದಿನಾಂಕ: ೩೧.೦೩.೨೦೧೬ಕ್ಕೆ ಸಂಘದಲ್ಲಿ ಮೊದಲು ತಗಾದೆಗೆ ಬಂದಂತಹ ಬೆಳೆ ಸಾಲದ ಪೈಕಿ ಸಾಮಾನ್ಯ ಬಡ್ಡಿ ದರದಲ್ಲಿ ರೈತ ಸದಸ್ಯರಿಂದ ವಸೂಲಿ ಮಾಡಲಾದ ಹಣವನ್ನು ಯಾವ ಖಾತೆಗೆ ಯಾವಾಗ ಜಮಾ ಮಾಡಲಾಗಿದೆ? (ವಿವರ ನೀಡುವುದು)

## ವಿದ್ಯುತ್ ಪರಿವರ್ತಕಗಳ ಕೊರತೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೪೮ (೪೨೫೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಒಂದು ಟ್ರಾನ್ಸ್‌ಫಾರ್ಮರ್ (ವಿದ್ಯುತ್ ಪರಿವರ್ತಕ) ದಿಂದ ಎಷ್ಟು ರೈತರ ಕೊಳವೆ ಬಾವಿಗಳಿಗೆ ಸಂಪರ್ಕ ಒದಗಿಸಲು ಸಾಧ್ಯ ; (ಮಾಹಿತಿ ನೀಡುವುದು)

(ಆ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಇದುವರೆವಿಗೆ ರೈತರ ಕೊಳವೆ ಬಾವಿಗಳಿಗೆ ಸಂಪರ್ಕ ಒದಗಿಸುವ ಉದ್ದೇಶದಿಂದ ಎಷ್ಟು ಟ್ರಾನ್ಸ್‌ಫಾರ್ಮರ್ (ವಿದ್ಯುತ್ ಪರಿವರ್ತಕ)ಗಳನ್ನು ಅಳವಡಿಸಲಾಗಿದೆ ;

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಇಲಾಖೆಯ ಅಂದಜಿನಂತೆ ಕೊರತೆ ಇರುವ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು ;

(ಈ) ಕೊರತೆ ಇರುವ ಕಡೆಗಳಲ್ಲಿ ಟ್ರಾನ್ಸ್‌ಫಾರ್ಮಾರ್‌ಗಳನ್ನು ಅಳವಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಪಶು ಸಂಗೋಪನಾ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೪೪೯ (೪೫೬೦) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದ ಪಶು ಸಂಗೋಪನಾ ಇಲಾಖೆಯಲ್ಲಿ ಎಷ್ಟು ಕೇಂದ್ರ ಪುರಸ್ಕೃತ ಯೋಜನೆಗಳು ಜಾರಿಯಲ್ಲಿವೆ ; ಇವುಗಳಿಗೆ ಎಷ್ಟು ಪ್ರಮಾಣದಲ್ಲಿ ಕೇಂದ್ರ ಸರ್ಕಾರ ತನ್ನ ಪಾಲಿನ ಅನುದಾನ ನೀಡುತ್ತಿದೆ ; ಇವುಗಳಿಗೆ ಕೇಂದ್ರ ಸರ್ಕಾರದಿಂದ ಕಳೆದ ನಾಲ್ಕು ವರ್ಷಗಳಲ್ಲಿ ಬಿಡುಗಡೆಯಾಗಿರುವ ಹಣವೆಷ್ಟು; ಬಳಕೆಯಾಗಿರುವ ಹಣವೆಷ್ಟು ;

(ಆ) ರಾಷ್ಟ್ರೀಯ ಪ್ರಾಣಿ ಜಾಡ್ಯ ನಿರೂಪಣಾ ಪದ್ಧತಿಯಲ್ಲಿ ಎಷ್ಟು ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳು ಯಾವ ಜಾಲತಾಣದಲ್ಲಿ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡುತ್ತಿದೆ ; ಪಶು ಸಂಗೋಪನಾ ಇಲಾಖೆಯು ರಾಜ್ಯದಲ್ಲಿ ಎಷ್ಟು ತಾಲ್ಲೂಕು ಕೇಂದ್ರಗಳಿಗೆ ಇಂಟರ್‌ನೆಟ್ ಸಂಪರ್ಕ ಹಾಗೂ ಕಂಪ್ಯೂಟರ್ ಪೂರೈಕೆ ಮಾಡಿರುತ್ತದೆ ; ಆನ್‌ಲೈನ್ ಮಾಹಿತಿ ಒದಗಿಸಲು ಪ್ರತ್ಯೇಕ ಸಿಬ್ಬಂದಿಯನ್ನು ನೇಮಿಸಲಾಗಿದೆಯೇ ; ನೇಮಿಸಿದ್ದಲ್ಲಿ, ಪೂರ್ಣ ವಿವರ ನೀಡುವುದು ;

(ಇ) ರಾಜ್ಯದಲ್ಲಿ ಇರುವ ಒಟ್ಟು ರಾಸುಗಳು ಎಷ್ಟು ; ಇವುಗಳಲ್ಲಿ ಎತ್ತು, ಹಸು, ಎಮ್ಮೆ ಹಾಗೂ ಕೋಣಗಳ ವಿವರ ನೀಡುವುದು ; ಜಾನುವಾರು ವಿಮಾ ಯೋಜನೆಗೆ ರೈತರ ಎಲ್ಲಾ ಪ್ರಕಾರದ ರಾಸುಗಳು ಸೇರ್ಪಡೆಯಾಗುತ್ತವೆಯೇ; ಇವುಗಳಲ್ಲಿ ಎಷ್ಟು ರಾಸುಗಳಿಗೆ ವಿಮಾ ಯೋಜನೆ ಕಳೆದ ಮೂರು ವರ್ಷಗಳಲ್ಲಿ ನೀಡಲಾಗಿದೆ ; ರಾಸುಗಳು ಮರಣ ಹೊಂದಿದಾಗ ಇಲ್ಲಿಯವರೆಗೆ ಮೂರು ವರ್ಷಗಳಲ್ಲಿ ಎಷ್ಟು ವಿಮಾ ಮೊತ್ತವನ್ನು ನೀಡಲಾಗಿದೆ ; ರಾಜ್ಯ ಸರ್ಕಾರವು ವಿಮಾ ಕಂತಿನ ಸೇವಾ ತೆರಿಗೆಯನ್ನು ಪಾವತಿ ಮಾಡುತ್ತಿದೆಯೇ ;

(ಈ) ರಾಜ್ಯದಲ್ಲಿ ಬೇಡ್ ಪಾಲಕ್ ಭೀಮಾ ಯೋಜನೆ ಎಂದಿನಿಂದ ಜಾರಿಗೊಳಿಸಲಾಗಿದೆ ; ಈ ಯೋಜನೆಯಲ್ಲಿ ೦೧/೦೪/೨೦೧೩ ರಿಂದ ಇಲ್ಲಿಯವರೆಗೆ ಎಷ್ಟು ಜನರಿಗೆ ವಿಮಾ ಮೊತ್ತವನ್ನು ಪಾವತಿ ಮಾಡಲಾಗಿದೆ; ಬಾಕಿಯಿರುವ ಅರ್ಜಿಗಳು ಎಷ್ಟು ; ಈ ಯೋಜನೆಯಲ್ಲಿ ವಿದ್ಯಾರ್ಥಿ ವೇತನವನ್ನು ಹೆಚ್ಚುಗೊಳಿಸಲು ಸರ್ಕಾರದ ಕ್ರಮವೇನು ;

(ಉ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಎಷ್ಟು ಪಶುಸಂಗೋಪನಾ ಆಸ್ಪತ್ರೆಗಳು ಇರುತ್ತವೆ ; ಇವುಗಳಲ್ಲಿ ಪೂರ್ಣ ಪ್ರಮಾಣದ ವೈದ್ಯರು ಮತ್ತು ಸಿಬ್ಬಂದಿ ನೇಮಕವಾಗಿರುತ್ತಾರೆಯೇ ; ಸದರಿ ಆಸ್ಪತ್ರೆಗಳ ನಿರ್ವಹಣೆಗೆ ಮತ್ತು ಔಷಧಿಗಳ ಪೂರೈಕೆಗೆ ಕಳೆದ ಮೂರು ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು ? (ವಿವರ ನೀಡುವುದು)

## ಇಂಧನ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೫೦ (೪೨೬೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇಂಧನ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ವಿದ್ಯುತ್ ಇಲಾಖೆಯಲ್ಲಿನ ಖಾಲಿ ಹುದ್ದೆಗಳಿಂದ ಸಮರ್ಪಕವಾಗಿ ವಿದ್ಯುತ್ ಸಮಸ್ಯೆಗಳನ್ನು ಬಗೆಹರಿಸಲು ಸಾಧ್ಯವಾಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೊಡಗು ಜಿಲ್ಲೆಯಲ್ಲಿನ ವಿದ್ಯುತ್ ಇಲಾಖೆಯಲ್ಲಿನ ಖಾಲಿ ಹುದ್ದೆಗಳನ್ನು ತುಂಬಲು ಯಾವ ಕ್ರಮ ವಹಿಸಲಾಗಿದೆ ? (ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500